ಬೇಲೂರಿನಲ್ಲಿ ನ್ಯಾಯಾಲಯ ಪ್ರಾರಂಭಿಸುವ ಬಗ್ಗೆ.

3461- ನ್ಯಾಯಾಲಯ ಪ್ರಾರಂಭಿಸುವ ಬಗ್ಗೆ : ಮಾನ್ಯ ಕಾನೂನು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೇಲೂರಿನಲ್ಲಿ ನ್ಯಾಯಾಲಯವನ್ನು ಈ ವರ್ಷವೇ ಪ್ರಾರಂಭಿಸಲಾಗುವುದೆಂದು ಮಾನ್ಯ ಮುಖ್ಯಮಂತ್ರಿಗಳು ಆಶ್ವಾಸನೆ ಕೊಟ್ಟಿರುವುದು ನಿಜವೇ?*

ಆ) *ಈಗಾಗಲೇ ಜಿಲ್ಲಾ ನ್ಯಾಯಾಧೀಶರು ತಾತ್ಕಾಲಿಕವಾಗಿ ನ್ಯಾಯಾಲಯವನ್ನು ಪ್ರಾರಂಭಿಸಲು ಕಟ್ಟಡಗಳ ಪರಿಶೀಲನೆ ನಡೆಸಿ ವರದಿ ಕಳಿಸಿರುವುದು ನಿಜವೇ?*

ಇ) *ಹಾಗಿದ್ದಲ್ಲಿ ಬೇಲೂರಿನಲ್ಲಿ ಈಗ ನ್ಯಾಯಾಲಯವನ್ನು ಪ್ರಾರಂಭ ಮಾಡುವಿರಾ ಎಂದಿನಿಂದ ಕಾರ್ಯಗತ ಗೊಳಿಸುವಿರಿ?*

ಶ್ರೀ ಬ್ಲೀಸಿಯಸ್ ಎಂ ಡಿಸೋಜ (ಕಾನೂನು ಸಚಿವರು) :

ಅ) ಹೌದು

ಆ) ಹೌದು.

ಇ) ಸೂಕ್ತ ಕಟ್ಟಡ ದೊರೆತ ಮೇಲೆ ಹಾಗೂ ರಾಜ್ಯದ ಸಂಪನ್ಮೂಲಗಳನ್ನು ಅನುಸರಿಸಿ ನ್ಯಾಯಾಲಯವನ್ನು ಪ್ರಾರಂಭಿಸಲಾಗುವುದು.

ಚುಕ್ಕೆಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಅಧ್ಯಕ್ಷರು : ಚುಕ್ಕೆ ಗುರುತಿಲ್ಲದ ಪ್ರಶ್ನೆಗಳು, 31ನೇ ಪಟ್ಟಿ.

ಶ್ರೀ ಟಿ.ಎನ್. ನರಸಿಂಹಮೂರ್ತಿ : ಇಂದು ಸದನದಲ್ಲಿ ಲಿಖಿತ ಮೂಲಕ ಉತ್ತರಿಸಬೇಕಾಗಿದ್ದ 331ನೇ ಪಟ್ಟಿಯಲ್ಲಿರುವ 126 ಪ್ರಶ್ನೆಗಳ ಪೈಕಿ 0099 ಚುಕ್ಕೆ ಗುರುತಿಲ್ಲದ ಪಶ್ನೆಗಳನ್ನು ಸಭೆಯ ಮುಂದೆ ಮಂಡಿಸುತ್ತೇನ.

ಚಿತ್ತಾಪುರ ತಾಲ್ಲೂಕಿನಲ್ಲಿ ಬಸ್ ಡಿಪೋಗಳನ್ನು ತೆರೆಯುವುದು.

3351 - ಶ್ರೀ ಬಾಬುರಾವ್ ಚಿಂಚನ ಸೂರ್, (ಚಿತ್ತಾಪುರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಿತ್ತಾಪುರ ತಾಲ್ಲೂಕಿಗೆ ಬಸ್ ಡಿಪೋ ಮಂಜೂರಾತಿ ದೊರೆತು ವರ್ಷವಾದರೂ ಕೂಡ ಯಾವ ವಿಧವಾದ ಕೆಲಸಕಾರ್ಯಗಳು ಪ್ರಾರಂಭವಾಗಿಲ್ಲದಿರಲು ಕಾರಣವೇನು?*

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು) :

ಅ) ಇಲ್ಲಿಯವರೆಗೆ ಜಮೀನನ್ನು ಸ್ವಾಧೀನಪಡಿಸಿ ಕೊಂಡಿರುವುದಿಲ್ಲ.

ಆ) ಹೈದರಾಬಾದ್-ಕರ್ನಾಟಕ ಅಭಿವೃದ್ಧಿ ಸಮಿತಿಯ ಬೇಕಾದ ಹಣವನ್ನು ಬಿಡುಗಡೆ ಮಾಡಿರುವುದಿಲ್ಲ.

ಮೈಸೂರು ನಗರದಲ್ಲಿ ನೂತನ ಡಿಪೋಗಳ ಬಗ್ಗೆ.

3406 - ಶ್ರೀ ಕೆ. ಹರ್ಷಕುಮಾರ್ ಗೌಡ (ಚಾಮರಾಜ) : ಮಾನ್ಯ ಸಾರಿಗೆ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮೈಸೂರು ನಗರದಲ್ಲಿ ನೂತನವಾಗಿ ಪ್ರಾರಂಭಿಸಲು ಉದ್ದೇಶಿಸಲಾಗಿರುವ ಡಿಪೋಗಳ ಸಂಖ್ಯೆ ಎಷ್ಟು?*

ಆ) *ಇವುಗಳನ್ನು ನಗರದ ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲಾಗುವುದು?*

ಇ) *ಇವುಗಳಿಗೆ ತಗಲುವ ಅಂದಾಜು ವೆಚ್ಚವೆಷ್ಟು?*

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು)